144ನೇ ಅಧಿವೇಶನದಲ್ಲಿ ದಿ: 20/9/21ರಂದು ಸದನದಲ್ಲಿ
ಚುಕ್ಕೆಯಿಲ್ಲದ ಪ್ರ-72, ಕ್ರ-141

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಆಯನೂರು ಮಂಜುನಾಥ್ ಮತ್ತು ಶ್ರೀಎಸ್.ವಿ.ಸಂಕನೂರು, ಶ್ರೀ ಮರಿತಿಬ್ಬೇಗೌಡ, ಪುಟ್ಟಣ್ಣ ಇವರುಗಳು ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ವಿಷಯ:- ಖಾಸಗಿ ಅನುದಾನಿತ ಹಾಗೂ ಸರ್ಕಾರಿ ಶಾಲಾ ಕಾಲೇಜುಗಳಲ್ಲಿ ದಿನಾಂಕ:01 04-2006ರ ಪೂರ್ವದ ಸೇವೆಯನ್ನು ಪರಿಗಣಿಸದೇ ಇರುವುದರಿಂದ ಸದರಿ ನೌಕರರ ಪಿಂಚಣಿ ಸೌಲಭ್ಯದಿಂದ ವಂಚಿತರಾಗುತ್ತಿರುವ ಕಾರಣದಿಂದ ಉಚ್ಚ ನ್ಯಾಯಾಲಯ ಹಾಗೂ ಸರ್ವೋಚ್ಚ ನ್ಯಾಯಾಲಯಗಳ ತೀರ್ಪಿನನ್ವಯ ನೌಕರರು ಸೇವೆಗೆ ಸೇರಿದ ದಿನಾಂಕದಿಂದ ನಿವೃತ್ತಿವರೆಗಿನ ವೇತನವನ್ನು ನಿಗದಿ ಪಡಿಸುವ ಜೊತೆಗೆ ಹಳೆಯ ನಿಶ್ಚಿತ ಪಿಂಚಣಿ(O.P.S) ಸೌಲಭ್ಯವನ್ನು ಒದಗಿಸುವ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.**

**ಉತ್ತರ:**

ದಿನಾಂಕ:01.04.2006ರ ನಂತರ ನೇಮಕಾತಿ ಹೊಂದಿದ ಸಿಬ್ಬಂದಿಗಳಿಗೆ ಕಡ್ಡಾಯವಾಗಿ ಸರ್ಕಾರದ ಆದೇಶ ಸಂಖ್ಯೆ: FD(SPL)04 PET 2005 ದಿನಾಂಕ:01.04.2006ರರನ್ವಯ ನೂತನ ಪಿಂಚಣಿ ಯೋಜನೆ ಅನ್ವಯವಾಗುತ್ತದೆ. ಸರ್ಕಾರದ ಆದೇಶ ಸಂಖ್ಯೆ:ಆಇ 34 ಪಿಇಎನ್ 2018 ದಿನಾಂಕ:23.06.2018ರಲ್ಲಿ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಯಡಿ ಬರುವ ಸರ್ಕಾರಿ ನೌಕರರಿಗೆ ನಿವೃತ್ತಿ ಉಪಧನ, ಮರಣ ಮತ್ತು ಕುಟುಂಬ ಪಿಂಚಣಿಯನ್ನು ವಿಸ್ತರಿಸಲಾಗಿದೆ.

**ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳಿಗೆ:**

ದಿನಾಂಕ:01.04.2006ರ ಪಿಂಚಣಿ ನೀತಿಯಲ್ಲಿ ಅನುದಾನಿತ ಶಾಲೆಗಳ ನೌಕರರಿಗೆ ಪಿಂಚಣಿ ಒದಗಿಸುವ ಕುರಿತು ಮೇಲ್ಕಂಡ ಸರ್ಕಾರದ ಆದೇಶದ ಕ್ರಮ ಸಂಖ್ಯೆ:8 ರಲ್ಲಿ ಈ ಕೆಳಗಿನಂತೆ ಆದೇಶಿಸಿದೆ.

....(8) ಸಹಾಯಾನುದಾನದ ಶಿಕ್ಷಣ ಸಂಸ್ಥೆಗಳ ನೌಕರರಿಗೆ, ಗೊತ್ತು ಮಾಡಿದ ಪ್ರಯೋಜನ ಪಿಂಚಣಿಯನ್ನು ದಿನಾಂಕ:01.04.2006ರಂದು ಅಥವಾ ಅದರ ತರುವಾಯ ಸೇರುವ ಹೊಸದಾಗಿ ನೇಮಕಗೊಂಡ ಸಿಬ್ಬಂದಿಗೆ ನಿಲ್ಲಿಸಿಬಿಡತಕ್ಕದ್ದು. ನೂತನ ನಿಗಧಿತ ವಂತಿಗೆ ಪಿಂಚಣಿ ಯೋಜನೆಯು, ಆಯ್ಕೆಯ ಅವಕಾಶದ ಆಧಾರದ ಮೇಲೆ ನೌಕರನಿಗೆ ಮತ್ತು ನಿಯೋಜಕನಿಗೆ ಅನ್ವಯವಾಗತಕ್ಕದ್ದು ಮತ್ತು ಆಯ್ಕೆಯ ಅವಕಾಶವನ್ನು ಇಬ್ಬರಿಂದಲೂ ಚಲಾಯಿಸತಕ್ಕದ್ದು. ಆದರೆ ನಿಯೋಜಕರ ವಂತಿಗೆಯನ್ನು ಸಂಬಂಧಪಟ್ಟ ಸಂಸ್ಥೆಗಳು ಭರಿಸತಕ್ಕದ್ದು. ಆದರೆ ರಾಜ್ಯ ಸರ್ಕಾರವಲ್ಲ.

- ಈ ಆದೇಶವು ದಿನಾಂಕ:01.04.2006ರಿಂದ ಜಾರಿಗೆ ಬಂದಿರುತ್ತದೆ.
- ದಿನಾಂಕ:01.04.2006ರ ನಂತರ ಅನುದಾನಸಹಿತ ಅನುಮೋದನೆಗೊಂಡ ಅನುದಾನಿತ ಖಾಸಗಿ ಶಾಲೆ/ಕಾಲೇಜುಗಳಲ್ಲಿನ ಸಿಬ್ಬಂದಿಗಳಿಗೆ ಈ ಮೇಲಿನ ನಿಯಮ ಅನ್ವಯವಾಗುತ್ತದೆ.

- ಅನುದಾನಿತ ಸಿಬ್ಬಂದಿಗಳ ಸೇವಾ ಸೌಲಭ್ಯಗಳು ಅನುದಾನಸಹಿತವಾಗಿ ಅನುಮೋದನೆಗೊಂಡ ದಿನಾಂಕದಿಂದ ಅನ್ವಯವಾಗುತ್ತದೆ. ಆದುದರಿಂದ 2006ರ ಪೂರ್ವದಲ್ಲಿ ಅನುದಾನರಹಿತವಾಗಿ ನೇಮಕಗೊಂಡ ಸಿಬ್ಬಂದಿಗಳು ದಿನಾಂಕ:01.04.2006ರ ನಂತರ ಅನುದಾನಕ್ಕೆ ಒಳಪಟ್ಟಲ್ಲಿ ಅಂತಹ ಸಿಬ್ಬಂದಿಗಳು ಹೊಸ ಪಿಂಚಣಿ ಯೋಜನೆ(NPS) ವ್ಯಾಪ್ತಿಗೆ ಒಳಪಡುತ್ತಾರೆ.

- ಈ ಪಿಂಚಣಿ ಯೋಜನೆಯು ಸಂಪೂರ್ಣವಾಗಿ ಸ್ವ-ಇಚ್ಛಾ (optional) ನೆಲೆಯಲ್ಲಿ ಜಾರಿಗೊಳಿಸುವುದರಿಂದ ಕಡ್ಡಾಯಗೊಳಿಸಲು ಅವಕಾಶವಿರುವುದಿಲ್ಲ.

ಸಂಖ್ಯೆ:ಇಪಿ 340 ಎಸ್‌ಇಎಸ್ 2021

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು